158ನೇ ಪ್ರ 188

<u>**ಕರ್ನಾಟಕ ವಿಧಾನ ಪರಿಷತ್ತು**</u>

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ಯತೀಂದ್ರ ಎಸ್ ಇವರು ನಿಯಮ 72ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ರಾಜ್ಯಾದ ಗ್ರಾಮ ಪಂಚಾಯಿತಿಗಳ ಗ್ರಾಮಠಾಣಾ ವ್ಯಾಪ್ತಿಯಲ್ಲಿ ನಮೂನೆ-11ಎ ಇ-ಸ್ವತ್ತು ಸೃಜಿಸಲು ಮೂಲ ದಾಖಲೆಯಾದ ಸಬ್ ರಿಜಿಸ್ಟ್ರಾರ್ ಕಚೇರಿಯಿಂದ ನೋಂದಣಿಯಾದ ನೋಂದಾವಣಿ ಪತ್ರ, ವಿಲ್ ಹಾಗೂ ಸೇಲ್ ಡೀಡ್ ಕೇಳುತ್ತಿದ್ದು, ಗ್ರಾಮಠಾಣಾ ವ್ಯಾಪ್ತಿಯಲ್ಲಿರುವ ಎಲ್ಲಾ ಆಸ್ತಿಗಳಿಗೆ ನೋಂದಣಿ ಪತ್ರ ಇರುವುದಿಲ್ಲ. ಇದರಿಂದಾಗಿ ಸಾರ್ವಜನಿಕರು ತಮ್ಮ ಆಸ್ತಿಗಳಿಗೆ ಇ-ಸ್ವತ್ತು ಪಡೆಯಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ನಮೂನೆ-11ಎ ಪಡೆಯಲು ಸಬ್‌ರಿಜಿಸ್ಟ್ರಾರ್ ನೋಂದಣಿ ಪತ್ರ, ವಿಲ್ ಹಾಗೂ ಸೇಲ್‌ಡೀಡ್ ಇವುಗಳಿಂದ ವಿನಾಯಿತಿ ನೀಡಿ ಈ ಹಿಂದೆ ಇದ್ದಂತೆಯೇ ಗ್ರಾಮ ಪಂಚಾಯಿತಿಯಲ್ಲಿ ಲಭ್ಯವಿರುವ ದಾಖಲೆಗಳನ್ನು ಪಡೆದು ಸಾರ್ವಜನಿಕರಿಗೆ ಇ-ಸ್ವತ್ತು ಸೃಜಿಸಲು ಅವಕಾಶ ಮಾಡಿಕೊಡುವ ಬಗ್ಗೆ.

<u>**ಉತ್ತರ:**</u> ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025 ಅನ್ನು ದಿನಾಂಕ: 07.04.2025 ರಂದು ಅಧಿಸೂಚಿಸಲಾಗಿದ್ದು, ಪ್ರಕರಣ 199 ಕ್ಕೆ ಹೊಸದಾಗಿ ಪ್ರಕರಣ 199ಬಿ ಮತ್ತು 199ಸಿ ಗಳನ್ನು ಅಧಿಸೂಚಿಸಲಾಗಿರುತ್ತದೆ. ಈ ಅಧಿಸೂಚನೆಯನ್ವಯ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ಅನ್ನು ದಿನಾಂಕ: 17.10.2025 ರಂದು ಅಧಿಸೂಚಿಸಲಾಗಿರುತ್ತದೆ.

ಈ ನಿಯಮಗಳನ್ವಯ ಗ್ರಾಮಠಾಣಾ ಆಸ್ತಿಗಳಿಗೆ ಸಂಬಂಧಿಸಿದಂತೆ ದಿಶಾಂಕ್ /ತಹಶೀಲ್ದಾರರ ಗ್ರಾಮ ಠಾಣಾ ನಕ್ಷೆ ಹಾಗೂ ಸೇಲ್ ಡೀಡ್ / ಪಿತ್ರಾರ್ಜಿತ ಆಸ್ತಿ/ ಆಸ್ತಿ ವಿಭಜನೆ / ಗಿಫ್ಟ್ ಡೀಡ್ /ವಿಲ್ / ಹಕ್ಕುಪತ್ರ / ರಿಲೀಜ್ ಡೀಡ್ / ವರ್ಗಾವಣೆ / ಸೆಟ್ಲಮೆಂಟ್ / ನ್ಯಾಯಾಲಯದ ಆದೇಶ / ಒಟ್ಟುಗೂಡಿಸು / ವಿಭಾಗ ಪತ್ರ / ಅದಲು ಬದಲು ದಾಖಲೆಗಳನ್ನು ಕಡ್ಡಾಯಗೊಳಿಸಲಾಗಿರುತ್ತದೆ.

ಮೇಲ್ಕಂಡ ದಾಖಲೆಗಳನ್ವಯ ಇ-ಸ್ವತ್ತು 2.0 ತಂತ್ರಾಂಶದ ಮೂಲಕ ನಮೂನೆ 11ಎ ಪಡೆಯಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ನೊಂದಾಯಿತ ದಾಖಲೆಗಳಿಲ್ಲದ ಗ್ರಾಮ ಠಾಣಾ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದಲ್ಲಿ ನಮೂನೆಗಳನ್ನು ವಿತರಣೆ ಮಾಡುವ ಬಗ್ಗೆ ಪರಿಶೀಲನೆಯಲ್ಲಿರುತ್ತದೆ.

**ಸಂಖ್ಯೆ:**RDPR 359 GPA 2026.

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.